| | |
|---|---|
| ಕರ್ನಾಟಕ ಸರ್ಕಾರ | ಸಿ ಆರ್ ಪಿ ಸಿ 67 |

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.3541/2021

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ನರಸಿಂಹ** | | |
| **ತಂದೆಃಹೆಸರು** | **ಈರಣ್ಣ** | **ಪಿಡಬ್ಲೂಃ** | **7** |
| **ವಯಸ್ಸು** | **26 ವರ್ಷ** | **ಸಿಡಬ್ಲೂಃ** | **2** |
| **ಉದ್ಯೋಗಃ** | **ಜೆ ಸಿ ಬಿ ಚಾಲಕ** | | |
| **ವಾಸ ಸ್ಥಳಃ** | **ಸಮ್ಮತಗೆರೆ.** | | |

**ದಿನಾಂಕ 29-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ಈ ದಿನ ನ್ಯಾಯಾಲಯದಲ್ಲಿ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ನನಗೆ ಘಟನೆಯ ಬಗ್ಗೆ ಏನೂ ಗೊತ್ತಿಲ್ಲ, ನಾನು ಅಪಘಾತವನ್ನು ನೋಡಿಲ್ಲ, ಪೋಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ**

ದಿನಾಂಕಃ25.02.2021 ರಂದು ನಾನು ಶ್ರೀಪುರಂ ಜಂಕ್ಷನ್‌ನಲ್ಲಿದ್ದಾಗ ನಾನು, ಚಾಸಾ-3 ಹಾಗೂ ಮೃತ ಹನುಮಂತ ನಮ್ಮ ಲಾರಿ ಸಂ. ಕೆ ಎ 16/ಸಿ 2826 ನ್ನು ಚೆಕ್ ಮಾಡುತ್ತಾ ನಿಂತಿದ್ದಾಗ,

ನಮ್ಮ ಲಾರಿ ಹಿಂದಿನಿಂದ ಆರೋಪಿತನು ತನ್ನ ಲಾರಿ ಸಂ. ಕೆ ಎ 04/ಡಿ 2971 ನ್ನು ಅತೀವೇಗ & ಅಜಾಗರೂಕತೆಯಿಂದ ನಡೆಸಿಕೊಂಡು ಬಂದು ನಮ್ಮ ಲಾರಿಗೆ ಟಕ್ಕರ್ ಕೊಟ್ಟ ಕಾರಣ ಚಾಸಾ-3 & ಹನುಮಂತನಿಗೆ ಗಾಯಗಳಾಗಿದ್ದವು, ಅವರನ್ನು ಆಸ್ಪತ್ರೆಗೆ ಕಳಿಸಿಕೊಟ್ಟಿದ್ದು, ನಂತರ ಹನುಮಂತನು ಚಿಕಿತ್ಸೆ ಫಲಕಾರಿಯಾಗದೆ ಮೃತನಾಗಿರುತ್ತಾನೆ ಎಂದರೆ ಸರಿಯಲ್ಲ. ಈ ಅಪಘಾತವು ಆರೋಪಿಯ ತಪ್ಪಿನಿಂದಲೇ ಆಗಿತ್ತು ಎಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ಹೇಳಿಕೆ ಕೊಟ್ಟಿದ್ದೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದಿರುವುದರಿಂದ, ಸಾಕ್ಷಿಯು ಪೋಲೀಸರಿಗೆ ನೀಡಿದ ಹೇಳಿಕೆಯನ್ನು ನಿಪಿ-22 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**